ಕೊಟ್ಟಿದ್ದಾರೆ. ಈಗಾಗಲೇ ನಾವು Letter of Intent ಅನ್ನು ಮೆ: ಟಾಟಾ ಮೋಟಾರ್ಸ್ ಲಿಮಿಟೆಡ್ ರವರಿಗೆ ಕೊಟ್ಟಿದ್ದೇವೆ. ಬಸ್‌ಗಳು ಬಂದ ತಕ್ಷಣ ಪ್ರಾರಂಭ ಮಾಡುತ್ತೇವೆ.

ಶ್ರೀ ಕೆ.ಬಿ. ಪ್ರಸನ್ನಕುಮಾರ್:– ಮಾನ್ಯ ಅಧ್ಯಕ್ಷರೆ, 6 ತಿಂಗಳಿನಿಂದ ಕೇಂದ್ರ ಸರ್ಕಾರದಿಂದ ಮಂಜೂರಾತಿ ಬರುತ್ತಿದೆ. ಅದಕ್ಕೋಸ್ಕರ ಅದು ತಡವಾಗುವುದಾದರೆ, ರಾಜ್ಯ ಸರ್ಕಾರದಿಂದಲೇ ಬಸ್ಸುಗಳನ್ನು ಕೊಡುವ ವ್ಯವಸ್ಥೆ ಮಾಡಬೇಕು.

ಶ್ರೀ ರಾಮಲಿಂಗಾರೆಡ್ಡಿ:– ಮಾನ್ಯ ಅಧ್ಯಕ್ಷರೆ, 2000 ಬಸ್ಸುಗಳು ನರ್ಮ್ ಸ್ಕೀಮ್‌ನಲ್ಲಿ sanction ಆಗಿದೆ. ಹಿಂದೆ ಸರ್ಕಾರದಲ್ಲಿ ಏನಾಗಿದೆ ಎಂದರೆ, approval ಆಯಿತು, ಹಣ ಬಿಡುಗಡೆ ಮಾಡಿರಲಿಲ್ಲ. ಈಗ ಮೊನ್ನೆ ಮೊದಲ ಕಂತಿನ ಹಣ ಬಿಡುಗಡೆ ಮಾಡಿದ್ದಾರೆ. ಈಗ ಇನ್ನೇನು ಬೇಗ ಆಗುತ್ತದೆ.

ಶ್ರೀ ಕೆ.ಬಿ. ಪ್ರಸನ್ನಕುಮಾರ್:– ಧನ್ಯವಾದಗಳು.

ಅಧ್ಯಕ್ಷರು:– ಈಗ ಶ್ರೀ ಹೆಚ್.ಡಿ. ರೇವಣ್ಣ ರವರು.

6) **ವಿಷಯ:** ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಗ್ರಾಮದಲ್ಲಿ ಶ್ರೀ ಹೆಚ್.ಡಿ. ದೇವೇಗೌಡರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪಿ.ಹೆಚ್.ಡಿ. ಹೊಂದಿದ ಉಪನ್ಯಾಸಕರುಗಳನ್ನು ನೇಮಿಸುವ ಬಗ್ಗೆ.

ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ):– ಮಾನ್ಯ ಅಧ್ಯಕ್ಷರೆ, ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಗ್ರಾಮದಲ್ಲಿ ಶ್ರೀ ಹೆಚ್.ಡಿ. ದೇವೇಗೌಡರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪಿ.ಹೆಚ್.ಡಿ. ಹೊಂದಿದ ಉಪನ್ಯಾಸಕರುಗಳನ್ನು ನೇಮಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಲೋಕೋಪಯೋಗಿ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ,

ಪಡುವಲಹಿಪ್ಪೆಯ ಶ್ರೀ ಹೆಚ್.ಡಿ. ದೇವೇಗೌಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಕೋರ್ಸಿನೊಂದಿಗೆ 2012–13ನೇ ಸಾಲಿನಿಂದ ಎಂ.ಕಾಂ. ಕೋರ್ಸು ಹಾಗೂ 2013–14ನೇ ಸಾಲಿನಿಂದ ಎಂ.ಎ. (ಇತಿಹಾಸ) ಎಂ.ಎಸ್.ಡ್ಲ್ಯು ಸ್ನಾತಕೋತ್ತರ ಪದವಿಗಳನ್ನು ಪ್ರಾರಂಭಿಸಲಾಗಿದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸಹಾಯಕ ಪ್ರಾಧ್ಯಾಪಕರುಗಳನ್ನು ನೇಮಕಾತಿ ಮಾಡುವಾಗ ಹಾಲಿ ಜಾರಿಯಲ್ಲಿರುವ ನಿಯಮಗಳನ್ವಯ ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55 ಅಂಕ ಪಡೆದು ಎನ್.ಇ.ಟಿ/ಎಸ್ಎಲ್ಇಟಿ/ಪಿ.ಹೆಚ್.ಡಿ ಪರೀಕ್ಷೆಯಲ್ಲಿ ತೆರ್ಗಡೆ ಹೊಂದಿರುವವರನ್ನು ನೇಮಕಾತಿ ಮಾಡಲಾಗುತ್ತಿದೆ.

ಈ ರೀತಿ ನೇಮಕಾತಿ ಹೊಂದಿರುವ ಸಹಾಯಕ ಪ್ರಾಧ್ಯಾಪಕರುಗಳು ಪದವಿ ಹಾಗೂ ಸ್ನಾತಕೋತ್ತರ ತರಗತಿಗಳಿಗೆ ಬೋಧನೆ ಮಾಡುತ್ತಿದ್ದಾರೆ. ಪಿ.ಹೆಚ್.ಡಿ ಹೊಂದಿರುವ ಬೋಧಕರನ್ನು ಆಧ್ಯತೆಯ ಮೇಲೆ ಸ್ನಾತಕೋತ್ತರ ಕೋರ್ಸುಗಳಲ್ಲಿ ಬೋಧನೆ ಮಾಡಲು ನೇಮಿಸಲಾಗುತ್ತಿದೆ. ಪಿ.ಹೆಚ್.ಡಿ. ಪದವಿ ಹೊಂದಿರುವ ಅಭ್ಯರ್ಥಿಗಳ ಲಭ್ಯತೆಯನ್ನು ಆಧರಿಸಿ ಶ್ರೀ ಹೆಚ್.ಡಿ. ದೇವೇಗೌಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಡುವಲಹಿಪ್ಪೆ ಇಲ್ಲಿಗೆ ಬೋಧಕರನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುವುದು. ಹೆಚ್.ಡಿ. ದೇವೇಗೌಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪಿಹೆಚ್.ಡಿ. ಮಾಡಿರುವವರನ್ನೇ appoint ಮಾಡಬೇಕೆಂದು ತಾವೇನು ಸಲಹೆ ಕೊಡುತ್ತಿದ್ದೀರಿ, ಅವರ ಲಭ್ಯತೆ ಕೂಡ ದೊಡ್ಡ ಪ್ರಶ್ನೆಯಾಗಿದೆ. ಪಿಹೆಚ್.ಡಿ. ಹೊಂದಿರುವ ಬೋಧಕರನ್ನು ಆದ್ಯತೆ ಮೇಲೆ ಸ್ನಾತಕೋತ್ತರ ಕೋರ್ಸುಗಳಲ್ಲಿ ಬೋಧನೆ ಮಾಡಲು ನೇಮಿಸುತ್ತಿದ್ದೇವೆ. ಅದಕ್ಕೆ ಲಭ್ಯತೆಯನ್ನಾಧರಿಸಿ ಬೋಧಕರನ್ನು ನೇಮಿಸುವ ಕೆಲಸ ಮಾಡುತ್ತೇವೆ.

ಶ್ರೀ ಹೆಚ್.ಡಿ. ರೇವಣ್ಣ:– ಬೇರೆ ಕಡೆ 4–4 ಬೋಧಕರನ್ನು ಹಾಕುತ್ತೀರಿ. ಇರುವ ಕಡೆ ಮಾಡಿ.

ಅಧ್ಯಕ್ಷರು:– ಇರಬೇಕಲ್ಲ. ಇದ್ದರೆ ಹಾಕುತ್ತಾರೆ.

ಶ್ರೀ ಟಿ.ಬಿ. ಜಯಚಂದ್ರ:– ನೀವು ಒಂದು ಕೆಲಸ ಮಾಡಿ, ಯಾರ್ಯಾರು ಪಿಹೆಚ್.ಡಿ. ಮಾಡಿದ್ದಾರೆಂದು ಒಂದು ಪಟ್ಟಿ ಇದ್ದರೆ ಅದನ್ನು ನಮಗೆ ಕಳುಹಿಸಿ ಕೊಟ್ಟರೆ . . . ಮಾನ್ಯ ಅಧ್ಯಕ್ಷರೆ, ಪಿಹೆಚ್.ಡಿ. ಇರುವವರನ್ನು ಹೆಚ್ಚು ಕಡಿಮೆ ಎಲ್ಲಾ ಕಡೆ appoint ಮಾಡಿಕೊಂಡಿದ್ದೇವೆ.

ಶ್ರೀ ಹೆಚ್.ಡಿ. ರೇವಣ್ಣ:– ಮಾನ್ಯ ಅಧ್ಯಕ್ಷರೆ, ನಾನು ಒಂದೇ ಕಾಲೇಜಿಗೆ ಕೇಳುತ್ತಿಲ್ಲ. ರಾಜ್ಯದಲ್ಲಿರುವ ಎಲ್ಲಾ ಕಾಲೇಜುಗಳಿಗೂ ಮಾಡಿ ಎಂದು ನಾನು ಮನವಿ ಮಾಡುತ್ತಿದ್ದೇನೆ.

ಶ್ರೀ ಟಿ.ಬಿ. ಜಯಚಂದ್ರ:– ಖಂಡಿತವಾಗಿ, ನಿಮ್ಮ ಸಲಹೆಯನ್ನು ಸ್ವೀಕಾರ ಮಾಡಿದ್ದೇವೆ. ಸ್ವಾಗತಿಸುತ್ತೇವೆ, ಕ್ರಮ ತೆಗೆದುಕೊಳ್ಳುತ್ತೇವೆ.

7) **ವಿಷಯ:** 1985ರ ವಿಶೇಷ ನೇಮಕಾತಿ ನಿಯಮಗಳನ್ವಯ ಸ್ನಾತಕೋತ್ತರ ಪದವಿಯಲ್ಲಿ ರ್ಯಾಂಕ್ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಗ್ರೂಪ್ ಎ ಮತ್ತು ಬಿ ಹುದ್ದೆಗಳಿಗೆ ಆಯ್ಕೆ ಮಾಡುವ ಬಗ್ಗೆ.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಕರ್ನಾಟಕ ಸಿವಿಲ್ ಸೇವೆಗಳು (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಕೆಲವೊಂದು ಗುಂಪು–ಎ ಮತ್ತು ಗುಂಪು–ಬಿ ಹುದ್ದೆಗಳಿಗೆ ವಿಶೇಷ ನೇಮಕಾತಿ) ನಿಯಮಗಳು, 1985 ದಿನಾಂಕ 11.4.1985ರಿಂದ ಜಾರಿಗೆ ಬಂದಿವೆ. ಈ ನಿಯಮಗಳ ಷೆಡ್ಯೂಲಿನಲ್ಲಿ ನಮೂದಿಸಿರುವ ಗ್ರೂಪ್–ಎ ಮತ್ತು ಗ್ರೂಪ್–ಬಿ ವೃಂದಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ